# All India Radio: Bangalore
## Regional Bulletin In Kannada
## 04.04.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಭವಿಷ್ಯದ ಆರ್ಥಿಕತೆಯಲ್ಲಿ ಸೂಕ್ಷ್ಮ, ಸಣ್ಣ, ಮಧ್ಯಮ ಉದ್ದಿಮಗಳು ಪ್ರಮುಖ ಪಾತ್ರ ವಹಿಸಲಿವೆ - ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್
2. ಕೇಂದ್ರ ಗೃಹ ಸಚಿವ ಅಮಿತ್ ಶಾ ಬೆಂಗಳೂರು ಭೇಟಿ ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
3. ಆಟೋ ಚಾಲಕರು ಬಳಸುವ ಇಂಧನ ತೆರಿಗೆ ಹಿಂಪಡೆಯುವಂತೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ರಾಜ್ಯ ಸರ್ಕಾರಕ್ಕೆ ಆಗ್ರಹ
4. ಬಾಗಲಕೋಟೆ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆ : ವಿವಿಧ ರಾಜಕೀಯ ಪಕ್ಷಗಳ ಮುಖಂಡರಿಂದ ಬಿರುಸಿನ ಪ್ರಚಾರ

<><><><>

ಭವಿಷ್ಯದ ಆರ್ಥಿಕತೆಯಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ. ಮೈಸೂರಿನ ಕೇಂದ್ರೀಯ ಆಹಾರ ತಂತ್ರಜ್ಞಾನ ಸಂಶೋಧನಾಲಯ ಸಂಸ್ಥೆಯ ಅಮೃತ ಮಹೋತ್ಸವ ಆಚರಣೆಯ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಸ್ಟಾರ್ಟ್‌ಅಪ್‌ಗಳನ್ನು ಆರಂಭಿಸುವುದು ಸುಲಭವಾದರೂ ಅವುಗಳನ್ನು ಸ್ಥಿರವಾಗಿ ನಡೆಸುವುದು ಹೆಚ್ಚು ಸವಾಲಿನ ವಿಷಯವಾಗಿದೆ. ಅದಕ್ಕಾಗಿ ಉತ್ತಮ ಮೌಲ್ಯಮಾಪನ, ಮಾರುಕಟ್ಟೆ ಕೌಶಲಗಳು ಮತ್ತು ನಿರಂತರ ಬೆಂಬಲ ಅಗತ್ಯವಿದೆ ಎಂದರು. ಸಿಎಸ್‌ಐಆರ್ ಸಂಸ್ಥೆಗಳು ಐಐಎಂಗಳಂತಹ ನಿರ್ವಹಣಾ ಸಂಸ್ಥೆಗಳೊಂದಿಗೆ ಸಹಕಾರ ಮಾಡಿಕೊಂಡರೆ, ಸ್ಟಾರ್ಟ್‌ಅಪ್‌ಗಳಿಗೆ ಮಾರ್ಗದರ್ಶನ ಮತ್ತು ಮಾರುಕಟ್ಟೆ ಬೆಂಬಲ ದೊರೆಯಬಹುದಾಗಿದೆ. ಇಂದಿನ ಡಿಜಿಟಲ್ ಯುಗದಲ್ಲಿ ಆಹಾರ ಉತ್ಪಾದನಾ ವಸ್ತುಗಳನ್ನು ಡಿಜಿಟಲ್ ರೂಪದಲ್ಲಿ, ಕ್ಯೂಆರ್ ಕೋಡ್‌ಗಳೊಂದಿಗೆ, ಚಿಕ್ಕ ವಿಡಿಯೋಗಳ ಮೂಲಕ ನೀಡುವುದರಿಂದ ಹೆಚ್ಚು ಪರಿಣಾಮಕಾರಿಯಾಗುತ್ತದೆ. ನಮ್ಮಲ್ಲಿರುವ ಆಹಾರದಲ್ಲಿ ಯಾವ ಪೋಷಕಾಂಶಗಳಿವೆ, ಇದನ್ನು ಹೇಗೆ ತಯಾರಿಸಬೇಕು ಎಂಬ ಮಾಹಿತಿಯನ್ನು ಅತ್ಯಂತ ಸರಳವಾಗಿ ಜನರಿಗೆ ತಲುಪಿಸಬೇಕು. ಇದಕ್ಕಾಗಿ ಒಂದು ಸಮರ್ಪಕವಾದ ಸೋಶಿಯಲ್ ಮೀಡಿಯಾ ತಂಡವನ್ನು ರಚಿಸಬೇಕೆಂದು ಸಚಿವರು ಸಲಹೆ ನೀಡಿದರು.

<><><><>

ಕೇಂದ್ರ ಗೃಹ ಸಚಿವ ಅಮಿತಾ ಶಾ ಅವರು ಬೆಂಗಳೂರಿಗೆ ಆಗಮಿಸಿದ್ದು, ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದಾರೆ. ಕಳೆದ ರಾತ್ರಿ ಬೆಂಗಳೂರಿಗೆ ಆಗಮಿಸಿದ ಸಚಿವ ಅಮಿತ್ ಶಾ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮತ್ತಿತರ ಮುಖಂಡರು ಎಚ್ ಎಎಲ್ ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿ; ಬರಮಾಡಿಕೊಂಡರು.

<><><><>

ಇಂಧನ ಪೂರೈಕೆ ವಿಚಾರವಾಗಿ ರಾಜ್ಯ ಕಾಂಗ್ರೆಸ್ ಸರ್ಕಾರದ ಕೆಲ ನಾಯಕರು ಕೇಂದ್ರ ಸರ್ಕಾರದ ಮೇಲೆ ವಿನಾಕಾರಣ ಟೀಕೆ ಮಾಡುತ್ತಿದ್ದಾರೆ. ಅದರ ಸಮನಾಂತರವಾಗಿ ಆಟೋ ಚಾಲಕರು ಬಳಸುವ ಇಂಧನದ ಮೇಲಿನ ತೆರಿಗೆಯನ್ನು ಈ ಸರ್ಕಾರ ವಿಧಿಸಿದೆ. ಹೀಗಾಗಿ ಈ ತೆರಿಗೆಯನ್ನು ಕೂಡಲೇ ವಾಪಸ್ ಪಡೆಯಬೇಕು ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಒತ್ತಾಯಿಸಿದ್ದಾರೆ. ಸಿಂಧನೂರಿನ ಹೊಸಹಳ್ಳಿಯಲ್ಲಿ ಸೈನಿಕ ಶಾಲೆಯ ಉದ್ಘಾಟನೆಗೆ ಆಗಮಿಸಿದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಜನರಿಗೆ ಈಗಾಗಲೇ ೫ ಗ್ಯಾರಂಟಿಗಳನ್ನು ಕೊಟ್ಟ ರೀತಿಯಲ್ಲೇ ಆಟೋ ಚಾಲಕರಿಗೂ ೬ನೇ ಗ್ಯಾರಂಟಿಯನ್ನು ಘೋಷಣೆ ಮಾಡಬೇಕು. ಈ ಪರಿಸ್ಥಿತಿ ಸರಿ ಹೋಗುವವರೆಗೂ ತಿಂಗಳಿಗೆ ೧೫ ಸಾವಿರ ರೂಪಾಯಿ ಗ್ಯಾರಂಟಿ ಹಣ ನೀಡಬೇಕೆಂದು ಹೇಳಿದರು. ಈಗ ಉಂಟಾಗಿರುವ ತೈಲ ಬಿಕ್ಕಟ್ಟು ನಾವು ತಂದಿಕೊಂಡಿರುವ ಸಮಸ್ಯೆಯಲ್ಲ. ಕೊಲ್ಲಿ ಭಾಗದಲ್ಲಿ ಉಂಟಾಗಿರುವ ಯುದ್ಧವೇ ಇದಕ್ಕೆ ಕಾರಣ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ಆದಾಗ್ಯೂ

ಜನಸಾಮಾನ್ಯರ ಜೀವನಕ್ಕೆ ತೊಂದರೆಯಾಗದಂತೆ ಪರಿಸ್ಥಿತಿ ನಿರ್ವಹಿಸುವ ಕೆಲಸವನ್ನು ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರ ಮಾಡುತ್ತಿದೆ. ಕಷ್ಟದ ಪರಿಸ್ಥಿತಿಯಲ್ಲೂ ಭಾರತಕ್ಕೆ ತೈಲ ಹಡಗುಗಳು ನಿರಾಯಾಸವಾಗಿ ಬರುತ್ತಿವೆ. ಪ್ರಧಾನಿ ಮೋದಿಯವರ ಸರ್ಕಾರ ಕೈಗೊಂಡ ಕ್ರಮಗಳೇ ಉತ್ತಮ ಪರಿಸ್ಥಿತಿಗೆ ಕಾರಣ ಎಂದು ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

<><><><>

ಕೋಲಾರ ಜಿಲ್ಲೆಯಲ್ಲಿ ವಿವಿಧ ಸಾಕ್ಷರತಾ ಕಾರ್ಯಕ್ರಮಗಳ ಪರಿಣಾಮವಾಗಿ ಸಾಕ್ಷರತಾ ಪ್ರಮಾಣವು ೨೦೧೧ರ ಜನಗಣತಿಯಲ್ಲಿದ್ದ ಶೇಕಡ ೭೪.೩೯ ರಿಂದ ಇದೀಗ ಶೇಕಡ ೮೪ಕ್ಕೆ ಏರಿಕೆಯಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ತಿಳಿಸಿದ್ದಾರೆ. ತಮ್ಮ ಕಚೇರಿಯಲ್ಲಿ ಇಂದು ಉಲ್ಲಾಸ್ ನವಭಾರತ ಸಾಕ್ಷರತಾ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆಯಲ್ಲಿ ಕಾರ್ಯಕ್ರಮದ ಕರಪತ್ರ ಬಿಡುಗಡೆ ಮಾಡಿದ ಅವರು, ೨೦೨೫-೨೬ನೇ ಸಾಲಿಗೆ ಕೇಂದ್ರ ಪುರಸ್ಕೃತ ಉಲ್ಲಾಸ್ ಯೋಜನೆಯಡಿ ಜಿಲ್ಲೆಯ ೧೦ ಸಾವಿರದ ೭೦೦ ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸುವ ಗುರಿ ಹೊಂದಲಾಗಿದೆ ಎಂದರು. ನಾಳೆ ಜಿಲ್ಲೆಯ ಅತ್ಯಂತ ಕಡಿಮೆ ಸಾಕ್ಷರತೆ ಹೊಂದಿರುವ ೩೨ ಗ್ರಾಮ ಪಂಚಾಯಿತಿಗಳ ೧೮೯ ಪರೀಕ್ಷಾ ಕೇಂದ್ರಗಳಲ್ಲಿ ಮೌಲ್ಯಮಾಪನ ಪರೀಕ್ಷೆ ನಡೆಯಲಿದ್ದು, ಒಟ್ಟು ೬ ಸಾವಿರ ಕಲಿಕಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ಜಿಲ್ಲೆಯಲ್ಲಿ ಶೇಕಡ ೧೦೦ ರಷ್ಟು ಸಾಕ್ಷರತೆ ಸಾಧಿಸುವ ನಿಟ್ಟಿನಲ್ಲಿ ಪ್ರಚಾರ ಸಪ್ತಾಹ, ವಿಚಾರ ಸಂಕಿರಣ ಮತ್ತು ಸಭೆಗಳನ್ನು ನಡೆಸುವ ಮೂಲಕ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಅವರು ಎಲ್ಲ ಇಲಾಖಾಧಿಕಾರಿಗಳಿಗೆ ಸೂಚಿಸಿದರು.

<><><><>

ವಿಜಯಪುರ ಜಿಲ್ಲೆಯಲ್ಲಿ ಸುರಿದ ಅಕಾಲಿಕ ಮಳೆಯಿಂದಾಗಿ ಉಂಟಾಗಿರುವ ದ್ರಾಕ್ಷಿ ಬೆಳೆ ಹಾನಿಯ ಕುರಿತು ಕೂಡಲೇ ಸಮೀಕ್ಷೆ ನಡೆಸಿ ವರದಿ ಸಲ್ಲಿಸುವಂತೆ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಜಿಲ್ಲಾಧಿಕಾರಿಗೆ ಸೂಚನೆ ನೀಡಿದ್ದಾರೆ. ಮಾರ್ಚ್ ತಿಂಗಳಲ್ಲಿ ಆಲಿಕಲ್ಲು ಮತ್ತು ಬಿರುಗಾಳಿ ಸಹಿತ ಮಳೆ ಸುರಿದ ಪರಿಣಾಮ ದ್ರಾಕ್ಷಿ ಸೇರಿದಂತೆ ನಾನಾ ಬೆಳೆಗಳು ಹಾನಿಯಾಗಿವೆ. ಈ ಕುರಿತು ಸಮಗ್ರ ಸಮೀಕ್ಷೆ ನಡೆಸುವಂತೆ ಜಿಲ್ಲಾಧಿಕಾರಿ, ತೋಟಗಾರಿಕೆ ಮತ್ತು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸಮೀಕ್ಷೆ ನಡೆಸುವಂತೆ ಸೂಚನೆ ನೀಡಲಾಗಿತ್ತು. ಈಗ ಮತ್ತೆ ಅಕಾಲಿಕ ಮಳೆಯಾಗಿ ಕೆಲವು ಕಡೆ ದ್ರಾಕ್ಷಿ ಮತ್ತು ಒಣದ್ರಾಕ್ಷಿ ಶೆಡ್‌ಗಳು ಹಾನಿಯಾಗಿವೆ. ಈ ಹಿನ್ನೆಲೆಯಲ್ಲಿ ಕೂಡಲೇ ಅಧಿಕಾರಿಗಳ ಸಭೆ ನಡೆಸಿ ಬೆಳೆಹಾನಿ ಕುರಿತು ಸಮೀಕ್ಷೆ ನಡೆಸಬೇಕು. ಈ ಸಮೀಕ್ಷೆಯಲ್ಲಿ ಬೆಳೆಹಾನಿಯಾದ ಯಾವುದೇ ರೈತರ ಹೆಸರು ಬಿಟ್ಟು ಹೋಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಕೃಷಿ ಮತ್ತು ತೋಟಗಾರಿಕೆ ಹಾಗೂ ಕಂದಾಯ ಇಲಾಖೆ ಜಂಟಿಯಾಗಿ ಸಮೀಕ್ಷೆ ನಡೆಸಿ ಶೀಘ್ರದಲ್ಲಿ ವರದಿ ಸಲ್ಲಿಸುವಂತೆ ಸಚಿವರು ಜಿಲ್ಲಾಧಿಕಾರಿಯರಿಗೆ ಸೂಚನೆ ನೀಡಿದ್ದಾರೆ.

<><><><>

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಪ್ರಚಾರ ಬಿರುಸುಗೊಂಡಿದ್ದು, ವಿವಿಧ ರಾಜಕೀಯ ಪಕ್ಷಗಳ ಮುಖಂಡರು ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಮತಯಾಚನೆ ಮಾಡುತ್ತಿದ್ದಾರೆ. ಬಾಗಲಕೋಟೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಡಾ.ಜಿ.ಪರಮೇಶ್ವರ್, ಹೆಚ್.ಸಿ.ಮಹದೇವಪ್ಪ, ಎಚ್.ಕೆ.ಪಾಟೀಲ್, ಶಿವನಂದಾ ಪಾಟೀಲ್ ಮತ್ತಿತರ ಚುನಾವಣಾ ಪ್ರಚಾರದಲ್ಲಿ ತೊಡಗಿದ್ದಾರೆ. ಬಿಜೆಪಿ ಅಭ್ಯರ್ಥಿಯ ಪರವಾಗಿ ವಿಧಾನಸಭೆ ವಿರೋಪಕ್ಷದ ನಾಯಕ ಆರ್.ಅಶೋಕ, ಮಾಜಿ ಮುಖ್ಯಮಂತ್ರಿ ಬಸವರಾಜಬೊಮ್ಮಾಯಿ, ಸಂಸದ ಗೋವಿಂದ ಕಾರಜೋಳ, ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಸೇರಿದಂತೆ ಇನ್ನಿತರ ಮುಖಂಡರು ಮತಯಾಚನೆ ಮಾಡುತ್ತಿದಾರೆ. ದವಣಗೆರೆ ದಕ್ಷಿಣ ಕ್ಷೇತ್ರದಲ್ಲೂ ಚುನಾವಣಾ ಪ್ರಚಾರ ಕಾವೇರಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ ಮೊದಲಾದ ಮುಖಂಡರು ಚುನಾವಣಾ ಪ್ರಚಾರದಲ್ಲಿ ಭಾಗಿಯಾಗಿದ್ದಾರೆ. ಕಾಂಗ್ರೆಸ್ ಮುಖಂಡರು ಕೂಡ ತಮ್ಮ ಪಕ್ಷದ ಅಭ್ಯರ್ಥಿಯ ಪರ ಮತಯಾಚನೆಯಲ್ಲಿ ತೋಡಗಿದ್ದಾರೆ.

<><><><>

ದಾವಣಗೆರೆ ದಕ್ಷಿಣ ವಿಧಾನಸಭಾ ಉಪ ಚುನಾವಣೆಯಲ್ಲಿ ಮತದಾನದ ಪ್ರಮಾಣ ಹೆಚ್ಚಿಸಲು ಮತ್ತು ಮತದಾರರನ್ನು ಆಕರ್ಷಿಸಲು ೧೦ ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ವಿಠ್ಠಲ ಮಾಧವರಾವ್ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಗೆ ಹೆಚ್ಚಿನ

ಮಾಹಿತಿ ನೀಡಿದ ಅವರು, ಮಹಿಳಾ ಮತದಾರರ ಸಂಖ್ಯೆ ಹೆಚ್ಚಿರುವ ಪ್ರದೇಶಗಳನ್ನು ಗುರುತಿಸಿ ಐದು ಸಖಿ ಮತಗಟ್ಟೆಗಳನ್ನು ನಿರ್ಮಿಸಲಾಗಿದೆ. ನಮ್ಮ ಕಲೆ ಮತ್ತು ಸಂಸ್ಕೃತಿಯನ್ನು ಬಿಂಬಿಸುವ ಉದ್ದೇಶದಿಂದ ಎರಡು ಮಾದರಿ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ. ಯುವ ಮತದಾರರು ಹೆಚ್ಚಿರುವ ಕಡೆಗಳಲ್ಲಿ ಎರಡು 'ಯುವ ಮತಗಟ್ಟೆ'ಗಳನ್ನು ನಿರ್ಮಿಸಲಾಗುತ್ತಿದ್ದು, ಇಲ್ಲಿ ೧೮ರಿಂದ ೨೧ವರ್ಷದೊಳಗಿನ ಯುವ ಸಿಬ್ಬಂದಿಯೇ ಕಾರ್ಯನಿರ್ವಹಿಸಲಿದ್ದಾರೆ. ವಿಶೇಷಚೇತನರಿಗಾಗಿ ಪ್ರತ್ಯೇಕ ಮತಗಟ್ಟೆ ಇರಲಿದ್ದು, ಇಲ್ಲಿನ ಅಧಿಕಾರಿ ಮತ್ತು ಸಿಬ್ಬಂದಿ ಕೂಡ ವಿಶೇಷಚೇತನರೇ ಆಗಿರುತ್ತಾರೆ ಎಂಬುದು ಗಮನಾರ್ಹ ಎಂದು ಗಿತ್ತೆ ವಿಠ್ಠಲ ಮಾಧವರಾವ್ ಹೇಳಿದರು.

<><><><>

ರಾಜ್ಯದಲ್ಲಿ ನೀರಾವರಿ ಕ್ಷೇತ್ರಕ್ಕೆ ಕಾಂಗ್ರೆಸ್ ಸರ್ಕಾರಗಳ ಕೊಡುಗೆ ಹಾಗೂ ಬಿಜೆಪಿ, ಕಾಂಗ್ರೆಸೇತರ ಸರ್ಕಾರಗಳ ಕೊಡುಗೆ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಂವಾದ ಏರ್ಪಡಿಸಬೇಕೆಂದು ಮಾಜಿ ಮುಖ್ಯಮಂತ್ರಿ ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸೇತರ ಮತ್ತು ಬಿಜೆಪಿ ಸರ್ಕಾರಗಳು ನೀರಾವರಿ ಕ್ಷೇತ್ರಕ್ಕೆ ಅತಿದೊಡ್ಡ ಕೊಡುಗೆ ನೀಡಿವೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಸಾಧನೆ ಬಹಳಷ್ಟು ಎಂದು ಹೆಮ್ಮೆ ಪಟ್ಟುಕೊಳ್ಳುತ್ತಿದ್ದಾರೆ. ಸಿದ್ದರಾಮಯ್ಯನವರ ಬಾದಾಮಿ ಕ್ಷೇತ್ರದ ಕೇರೂರು ಏತ ನೀರಾವರಿ ಯೋಜನೆಯನ್ನು ಕೈಗೊಂಡಿದ್ದೆ ನಾವು, ಬಹಳ ವರ್ಷದ ಬೇಡಿಕೆಯಾದ ವಿಜಯಪುರದ ರೇವಣಸಿದ್ಧೇಶ್ವರ ನೀರಾವರಿ ಯೋಜನೆಯನ್ನು ನಾವೇ ಮಾಡಿಸಿದ್ದು, ಕೆರೆ ತುಂಬಿಸುವ ಯೋಜನೆಯನ್ನು ಕೈಗೊಂಡಿದ್ದು ಕೂಡ ನಾವೇ ಎಂದು ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>